**DECEMBER 24,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಇಂದು 'ರಾಷ್ಟ್ರೀಯ ಗ್ರಾಹಕರ ದಿನಾಚರಣೆ. ಗ್ರಾಹಕರ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಜಾಗೃತಿ ಮೂಡಿಸಲು ಮೀಸಲಾದ ದಿನ. ಗ್ರಾಹಕ ದಿನಾಚರಣೆ ಮಹತ್ವದ ಬಗ್ಗೆ, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಗ್ರಾಹಕ ಹಕ್ಕುಗಳ ತಜ್ಞ ಹಾಗೂ ಧಾರವಾಡದ ಹಿರಿಯ ನ್ಯಾಯವಾದಿ, ಬಸವಪ್ರಭು ಹೊಸಕೇರಿ.**

<><><>

**ಬೈಟ್: ಬಸವ ಪ್ರಭು ಹೊಸಕೇರಿ 49 ಸೆಕೆಂದುಗಳು**

<><><>

**ಉಡುಪಿ ಜಿಲ್ಲೆ, ಸಾಲಿಗ್ರಾಮ ಪಟ್ಟಣ ಪಂಚಾಯತ್ ಸ್ವಚ್ಛ ಭಾರತ್ ಮಿ 'ನ್, ಸ್ವಚ್ಛತಾ ಸರ್ವೇಕ್ಷಣೆಗೆ ಸಂಬಂಧಿಸಿ, ಕೋಟ ವಿವೇಕ ಬಾಲಕಿಯರ ಪ್ರೌಢ ಶಾಲೆಯ ನಿವೃತ್ತ ಮುಖ್ಯೋಪಾಧ್ಯಾಯ, ಶ್ರೀಪತಿ ಹೇರ್ಳೆ ಹಾಗೂ ಮಣೂರು ಶ್ರೀರಾಮ ಪ್ರಸಾದ ಹಿರಿಯ ಪ್ರಾಥಮಿಕ ಶಾಲೆಯ ನಿವೃತ್ತ ಮುಖ್ಯೋಪಾಧ್ಯಾಯ ಜಿ. ರಾಮಚಂದ್ರ ಐತಾಳ್ ಅವರನ್ನು, ಸ್ವಚ್ಛತಾ ರಾಯಬಾರಿಗಳಾಗಿ, ನೇಮಿಸಲಾಗಿದೆ.**

<><><>

**ರಾಜ್ಯದಲ್ಲಿ 10 ಸಾವಿರದ 247 ಮಕ್ಕಳ ಮೇಲೆ, ಲೈಂಗಿಕ ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ; ಅಪರಾಧಿಗಳ ಮೇಲೆ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಲಾಗುತ್ತಿದೆ ಎಂದು, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಎಸ್.ಮಂಜು ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆ ಮಕ್ಕಳ ರಕ್ಷಣಾ ಘಟಕ ಆಯೋಜಿಸಿದ್ದ, ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮಕ್ಕಳು ಯಾವುದೇ ಸಮಸ್ಯೆ ಎದುರಿಸುತ್ತಿದ್ದರೆ, ನೇರವಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ 1–0–9–8 ಕ್ಕೆ ಕರೆ ಮಾಡಿ, ದೂರು ದಾಖಲಿಸುವಂತೆ, ಸೂಚಿಸಿದರು.**

<><><>

**ಧಾರವಾಡ ಜಿಲ್ಲೆ, ಹುಬ್ಬಳ್ಳಿಯ ನೆಹರೂ ನಗರದಲ್ಲಿ, ನಿರ್ಮಾಣಗೊಂಡ, ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ನೂತನ ಠಾಣೆ ಕಟ್ಟಡವನ್ನು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಉದ್ಘಾಟಿಸಿದರು. ಅಥಿತಿಯಾಗಿ ಗೃಹ ಖಾತೆ ಸಚಿವ ಜಿ. ಪರಮೇಶ್ವರ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳು ಪಾಲ್ಗೊಂಡಿದ್ದರು.**

<><><>

ಕಳೆದ 19 ರಂದು, ರಾಜ್ಯಾದ್ಯಂತ ಆರಂಭವಾದ, *ಪ್ರಶಾಸನ್, ಗಾಂವ್ ಕೀ ಓರ್'* 'ಗ್ರಾಮದ ಕಡೆಗೆ ಜಿಲ್ಲಾಡಳಿತ' ವಿಶೇಷ ಸುಶಾಸನ ಆಂದೋಲನ, ಇಂದಿಗೆ ಮುಕ್ತಾಯವಾಗಲಿದೆ.

<><><>

ಹುಬ್ಬಳ್ಳಿ ಧಾರವಾಡ ಬೈಪಾಸ್ ರಸ್ತೆ ನಿರ್ಮಾಣ ಕಾಮಗಾರಿ, 2025 ರ ಜೂನ್ ವೇಳೆಗೆ ಮುಕ್ತಾಯವಾಗಲಿದೆ ಎಂದು, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಪರಿಶೀಲನೆ ಬಳಿಕ, ತಿಳಿಸಿದ್ದಾರೆ.

<><><>

ಮಂಡ್ಯದಲ್ಲಿ ಜರುಗಿದ, 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ, ಏಳು ಲಕ್ಷ ಜನ ಭಾಗವಹಿಸಿದ್ದರು ಎಂದು, ಜಿಲ್ಲಾಡಳಿತ ತಿಳಿಸಿದೆ.

<><><>

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರ ಮೇಲೆ, ಕಾನೂನಾತ್ಮಕ ಕ್ರಮಕ್ಕೆ ಮುಖ್ಯಮಂತ್ರಿ ಹಾಗೂ ಸಭಾಪತಿ ಅವರಲ್ಲಿ ಮನವಿ ಮಾಡುವುದಾಗಿ, ಸಚಿವರಾದ ಲಕ್ಷ್ಮೀ ಹೆಬ್ಬಾಳಕರ, ಬೆಳಗಾವಿಯಲ್ಲಿ ತಿಳಿಸಿದ್ದಾರೆ.

<><><>

ಬೆಳಗಾವಿಯ ಸುವರ್ಣಸೌಧದಲ್ಲಿ ಶಾಸಕ ಸಿ.ಟಿ.ರವಿ ಅವರ ಮೇಲೆ ಹಲ್ಲೆಗೆ ಯತ್ನಿಸಿದ ಆರೋಪಿಗಳ ವಿರುದ್ಧ, ಹಿರೇ ಬಾಗೇವಾಡಿ ಠಾಣೆಯಲ್ಲಿ ಪೊಲೀಸರು ಎಫ್.ಐ.ಆರ್. ದಾಖಲಿಸಿದ್ದಾರೆ.

<><><>

ಧಾರವಾಡ ಜಿಲ್ಲೆ, ಹುಬ್ಬಳ್ಳಿಯ ಸಾಯಿ ನಗರದ, ಅಚ್ಚವ್ವನ ಕಾಲೊನಿ ಈಶ್ವರ ದೇವಸ್ಥಾನ ಕಟ್ಟಡದಲ್ಲಿ ಬೆಳಗಿನ ಜಾವ ಅಡುಗೆ ಅನಿಲ ಸೋರಿಕೆಯಾಗಿ ಸಂಭವಿಸಿದ ಅವಘಡದಲ್ಲಿ ಗಾಯಗೊಂಡ ಒಂಭತ್ತು ಜನರಲ್ಲಿ ಎಂಟು ಜನರ ಸ್ಥಿತಿ ಚಿಂತಾಜನಕವಾಗಿದೆ. ವೈದ್ಯರ ವಿಶೇಷ ತಂಡ ರಚಿಸಿ, ಉನ್ನತ ಮಟ್ಟದ ಚಿಕಿತ್ಸೆ ನೀಡಲು, ಕೆಎಂಸಿ–ಆರ್‌ಐ ನಿರ್ದೇಶಕರಿಗೆ ಸೂಚಿಸಲಾಗಿದೆ ಎಂದು, ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. 8 ಜನ ಗಾಯಾಳುಗಳ ದೇಹ ಶೇಕಡ 70ಕ್ಕೂ ಹೆಚ್ಚಿನ ಪ್ರಮಾಣದಲ್ಲಿ ಸುಟ್ಟಿದ್ದು, ಜೀವನ್ಮರಣದ ಮಧ್ಯೆ ಹೋರಾಟ ನಡೆಸುತ್ತಿದ್ದಾರೆ.

<><><>

ವಿಜಯನಗರ ಜಿಲ್ಲೆ ಹೂವಿನಹಡಗಲಿ ತಾಲೂಕಿನ, ಮೈಲಾರ ಮಲ್ಲಣ್ಣ ದೇವರ ಮೂರ್ತಿಯ ಗಜ ವಾಹನ ಮೆರವಣಿಗೆ ಹಾಗೂ ರಥೋತ್ಸವ ವಿಜೃಂಭಣೆಯಿಂದ ಜರುಗಿತು. ಜಾತ್ರೆ ನಿಮಿತ್ತ ಮಹಾರಾಷ್ಟ್ರ, ತೆಲಂಗಾಣ, ಆಂಧ್ರ ಪ್ರದೇಶ ಸೇರಿದಂತೆ, ರಾಜ್ಯದ ವಿವಿಧ ಜಿಲ್ಲೆಗಳಿಂದ ಭಕ್ತರು ಆಗಮಿಸಿ, ದರ್ಶನ ಪಡೆದರು.

<><><>

ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ, ಶಾಲೆ ಮತ್ತು ಅಂಗನವಾಡಿಗಳ ದುರಸ್ತಿಗೆ, 5 ಕೋಟಿ 67 ಲಕ್ಷ ರೂಪಾಯಿ ಬಿಡುಗಡೆ ಮಾಡಲಾಗಿದೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ ದಿನೇಶ ಗುಂಡೂರಾವ ತಿಳಿಸಿದ್ದಾರೆ. ಮಂಗಳೂರು ಜಿಲ್ಲಾ ಪಂಚಾಯ್ತಿಯ, ನೇತ್ರಾವತಿ ಸಭಾಂಗಣದಲ್ಲಿ, ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಯೋಜನೆಗಳ ಸಭೆಯಲ್ಲಿ, ಅವರು ಮಾತನಾಡಿದರು. ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ್ ತಿಮ್ಮಯ್ಯ ಸಭೆಗೆ ಮಾಹಿತಿ ನೀಡಿ, ಜಿಲ್ಲೆಯಲ್ಲಿ ಸ್ವಂತ ಕಟ್ಟಡ,

ನಿವೇಶನ ಇಲ್ಲದ 186 ಆರೋಗ್ಯ ಉಪ ಕೇಂದ್ರಗಳ ಪೈಕಿ, 157 ಕ್ಕೆ ನಿವೇಶನ ಲಭ್ಯವಾಗಿದೆ. ತಲಾ 65 ಲಕ್ಷ ರೂಪಾಯಿ ಘಟಕ ವೆಚ್ಚದಡಿ, 17 ಉಪ ಕೇಂದ್ರಗಳ ಕಟ್ಟಡ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿದೆ ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>